4.	ಗೌರಿಬಿದನೂರು	125
5.	ಬಾಗೇಪಲ್ಲಿ	102
6.	ಗುಡಿಬಂಡೆ	154
	ಒಟ್ಟು	1069

ಈ ದೇವಾಲಯಗಳ ಅಭಿವೃದ್ಧಿಗಾಗಿ ಯಾವುದೇ ಅನುದಾನ ಮೀಸಲಿಟ್ಟಿರುವುದಿಲ್ಲ. ದೇವಾಲಯಗಳ ಅಭಿವೃದ್ಧಿ ಅವಶ್ಯಕತೆಗನುಗುಣವಾಗಿ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗುತ್ತದೆ.

ಆ) ಬಾಗೇಪಲ್ಲಿ ತಾಲ್ಲೂಕು ವ್ಯಾಪ್ತಿಯಲ್ಲಿ 102 ಮತ್ತು ಗುಡಿಬಂಡೆ ತಾಲ್ಲೂಕು ವ್ಯಾಪ್ತಿಯಲ್ಲಿ 154 ಮುಜರಾಯಿ ದೇವಾಲಯಗಳಿವೆ.

2008–09 ಮತ್ತು 2009–10ನೇ ಸಾಲಿನಲ್ಲಿ ಗುಡಿಬಂಡೆ ಮತ್ತು ಬಾಗೇಪಲ್ಲಿ ಕ್ಷೇತ್ರದ ಮುಜರಾಯಿ ದೇವಾಲಯಗಳಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ.

2010–11ನೇ ಸಾಲಿನಲ್ಲಿ ಬಾಗೇಪಲ್ಲಿ ಕ್ಷೇತ್ರದ ಶ್ರೀ ಅವುಲಕೊಂಡರಾಯಸ್ವಾಮಿ ದೇವಸ್ಥಾನ, ಎ.ಸಿದ್ದಪಲ್ಲಿ, ಗೂಳೂರು, ರೂ. 2.00 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ.

ಇ) ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕಿನಲ್ಲಿ ಉಳಿದಿರುವ ದೇವಾಲಯಗಳನ್ನು ಮುಜರಾಯಿ ಇಲಾಖಾ ವ್ಯಾಪ್ತಿಗೆ ಸೇರಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ದೇವಸ್ಥಾನವನ್ನು ಅಭಿವೃದ್ಧಿಪಡಿಸುವುದು

878(1085) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ): ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭದ್ರಾವತಿ ಪಟ್ಟಣದಲ್ಲಿರುವ ಪ್ರಾಚೀನ ದೇವಸ್ಥಾನಗಳಾದ ಶ್ರೀ ಲಕ್ಷ್ಮೀನರಸಿಂಹ ದೇವಾಲಯ ಮತ್ತು ಹೊನ್ನೆಗುಡ್ಡ ದೇವಸ್ಥಾನ ಅಭಿವೃದ್ಧಿಪಡಿಸಲು ಹಲವಾರು ಬಾರಿ ಪತ್ರ ಬರೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಈ ದೇವಸ್ಥಾನ ಅಭಿವೃದ್ಧಿ ಕೈಗೊಳ್ಳದಿರಲು ಕಾರಣಗಳೇನು;

ಇ) ಈ ದೇವಸ್ಥಾನಗಳನ್ನು ಅಭಿವೃದ್ಧಿಪಡಿಸಲು ಎಂದಿನಿಂದ ಕ್ರಮ ಕೈಗೊಳ್ಳಲಾಗುವುದು?

ಡಾ: ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು):

ಅ) ಭದ್ರಾವತಿ ಪಟ್ಟಣದಲ್ಲಿರುವ ಪ್ರಾಚೀನ ದೇವಸ್ಥಾನವಾದ ಶ್ರೀ ಲಕ್ಷ್ಮೀನರಸಿಂಹ ದೇವಾಲಯವನ್ನು ಅಭಿವೃದ್ಧಿಪಡಿಸುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಹೊನ್ನೇಗುಡ್ಡ ದೇವಸ್ಥಾನದ ಅಭಿವೃದ್ಧಿಪಡಿಸುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಭದ್ರಾವತಿ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ,ದೇವಾಲಯದ ಸಂರಕ್ಷಣಾ ಕಾಮಗಾರಿಗಾಗಿ ರಾಜ್ಯ ಪುರಾತತ್ವ ಇಲಾಖೆಯ ವತಿಯಿಂದ ರೂ. 22.00 ಲಕ್ಷಗಳ ಅಂದಾಜುಪಟ್ಟಿಯನ್ನು ತಯಾರಿಸಲಾಗಿದೆ. ಸದರಿ ಇಲಾಖೆಯಲ್ಲಿ ಅನುದಾನದ ಕೊರತೆ ಇರುವುದರಿಂದ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ.

ಇ) ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಾಲಯದ ನಿಧಿಯಲ್ಲಿನ ಹಣದ ಮಾಹಿತಿ ಪಡೆದು ಉಳಿಕೆ ಹಣವನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಿ, ನಂತರ ಅಭಿವೃದ್ಧಿಪಡಿಸುವ ಬಗ್ಗೆ ಕ್ರಮ ಜರುಗಿಸಲಾಗುವುದು.

ಭದ್ರಾವತಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ

879 (1088) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?